ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 340
ಸದಸ್ಯರ ಹೆಸರು : ಶ್ರೀ ಹೆಚ್. ಎಂ. ರಮೇಶ್ ಗೌಡ
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 17.07.2019
ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಈವರೆಗೆ ಒತ್ತುವರಿಯಾಗಿರುವ ಗೋಮಾಳಗಳ ಸಂಖ್ಯೆ ಎಷ್ಟು; ಒತ್ತುವರಿಯಾದ ಗೋಮಾಳಗಳನ್ನು ಹಿಂಪಡೆಯಲಾಗಿದೆಯೇ; ಒತ್ತುವರಿದಾರರ ವಿರುದ್ಧ ಯಾವ ಕ್ರಮಕೈಗೊಳ್ಳಲಾಗಿದೆ; (ವಿವರ ನೀಡುವುದು)	ರಾಜ್ಯದಲ್ಲಿ ಒತ್ತುವರಿಯಾಗಿರುವ ಗೋಮಾಳ ಪ್ರಕರಣ ಸಂಖ್ಯೆ 256076. ಸದರಿ ಗೋಮಾಳ ಒತ್ತುವರಿ ಮಾಡಿರುವವರ ವಿರುದ್ಧ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 192–ಎ ಮತ್ತು 192–ಬಿ ರೀತ್ಯಾ ಕ್ರಮವಹಿಸಲಾಗುತ್ತಿದೆ ಹಾಗೂ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ ಒತ್ತುವರಿದಾರರ ವಿರುದ್ಧ ಪ್ರಕರಣ ದಾಖಲಿಸಿ, ನಿಯಮಾನುಸಾರ ಗೋಮಾಳ ಭೂಮಿಯನ್ನು ತೆರವುಗೊಳಿಸಲು ಕ್ರಮವಹಿಸಲಾಗುತ್ತಿದೆ.
ಆ)	ರಾಜ್ಯದ ಬಹುತೇಕ ತಾಲ್ಲೂಕು ಕಚೇರಿಗಳಲ್ಲಿ ರೈತರ ಆರ್.ಟಿ.ಸಿ.ಯಲ್ಲಿ ಬೆಳೆ ನೋಂದಾವಣಿ, ಪಹಣಿ ನೋಂದಾವಣಿ ಮುಂತಾದ ಕೆಲಸಗಳು ಸುಸೂತ್ರವಾಗಿ ಆಗುತ್ತಿಲ್ಲ ಎನ್ನುವ ದೂರುಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ;	ಇಲ್ಲ.
ಇ)	ತಾಲ್ಲೂಕು ಕಚೇರಿಯ ಭೂಮಿ ಕೇಂದ್ರವನ್ನು ಖಾಸಗಿ ನಿರ್ವಹಣೆಗೆ ಕೊಡಬೇಕೆನ್ನುವ ಆಗ್ರಹ ಕೇಳಿ ಬಂದಿದ್ದು ಈ ಕುರಿತು ಸರ್ಕಾರದ ನಿಲುವೇನು;	ಸರ್ಕಾರದ ಮುಂದೆ ಇಂತಹ ಪ್ರಸ್ತಾವನೆಗಳಿರುವುದಿಲ್ಲ.
ಈ)	ತಾಲ್ಲೂಕು ಹೋಬಳಿ ಕೇಂದ್ರಗಳ ವ್ಯಾಪ್ತಿಯಲ್ಲಿ ಜಮೀನುಗಳ ಸರ್ವೆ ಕಾರ್ಯ ಸಮರ್ಪಕವಾಗಿ ನಡೆಯುತ್ತಿಲ್ಲ ಎನ್ನುವ ಆರೋಪಗಳು ಕೇಳಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸರ್ವೆ ಅಧಿಕಾರಿಗಳ ನೇಮಕಾತಿ ಪ್ರಕ್ರಿಯೆ ಈಗ ಯಾವ ಹಂತದಲ್ಲಿದೆ?	ಭೂಮಾಪನ ಇಲಾಖೆಯಲ್ಲಿ ಖಾಲಿ ಇದ್ದ ಭೂದಾಖಲೆಗಳ ಸಹಾಯಕ ನಿರ್ದೇಶಕರ ಹುದ್ದೆಗಳಲ್ಲಿ ನೇರ ನೇಮಕಾತಿಯಿಂದ ಭರ್ತಿ ಮಾಡಬೇಕಾಗಿದ್ದ 54 ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗವನ್ನು ಕೋರಲಾಗಿತ್ತು. ಈ ಪೈಕಿ 53 ಅಭ್ಯರ್ಥಿಗಳು ಲಭ್ಯವಿರುವುದಾಗಿ ಆಯ್ಕೆ ಪಟ್ಟಿಯನ್ನು ಕಳುಹಿಸಿದ್ದು, ಸದರಿ 53 ಅಭ್ಯರ್ಥಿಗಳಲ್ಲಿ ಸಿಂಧುತ್ವ ಪ್ರಮಾಣ ಪತ್ರ ಮತ್ತು ಪೋಲಿಸ್ ವರದಿ ಸ್ವೀಕೃತವಾದ 32 ಅಭ್ಯರ್ಥಿಗಳಿಗೆ ದಿನಾಂಕ:16.02.2019 ರಂದು ನೇಮಕಾತಿ ಆದೇಶವನ್ನು ನೀಡಲಾಗಿದೆ.

		ಈ ಪೈಕಿ 29 ಅಭ್ಯರ್ಥಿಗಳು ಕರ್ತವ್ಯಕ್ಕೆ ಹಾಜರಾಗಿರುತ್ತಾರೆ. ಕರ್ತವ್ಯಕ್ಕೆ ಹಾಜರಾಗದ 03 ಅಭ್ಯರ್ಥಿಗಳಿಗೆ ಅಂತಿಮ ನೋಟಿಸ್ ನೀಡಲಾಗಿತ್ತು. ಆದರೂ ಸಹ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುವುದಿಲ್ಲ. ಸಿಂಧುತ್ವ ಪ್ರಮಾಣ ಪತ್ರ ಮತ್ತು ಪೋಲಿಸ್ ವರದಿ ಸ್ವೀಕರಿಸದ 21 ಅಭ್ಯರ್ಥಿಗಳಿಗೆ ಅಂತಿಮ ನೋಟಿಸ್ ನೀಡಿ ಸಕ್ಷಮ ಪ್ರಾಧಿಕಾರಗಳು ಕೋರಿರುವ ಮಾಹಿತಿ/ ದಾಖಲೆಗಳನ್ನು ಒದಗಿಸಲು ಸೂಚಿಸಲಾಗಿದೆ. ಅಗತ್ಯ ದಾಖಲೆಗಳು ಸಲ್ಲಿಸದಿದ್ದಲ್ಲಿ ಅಂತಹ ಅಭ್ಯರ್ಥಿಗಳೊಂದಿಗೆ ಕರ್ತವ್ಯಕ್ಕೆ ಹಾಜರಾಗದ 03 ಅಭ್ಯರ್ಥಿಗಳನ್ನು ಸೇರಿದಂತೆ ಕೆ.ಪಿ.ಎಸ್.ಸಿ ಗೆ ಮಾಹಿತಿ ನೀಡಿ ಹೆಚ್ಚುವರಿ ಪಟ್ಟಿಯಲ್ಲಿನ ಅಭ್ಯರ್ಥಿಗಳ ಮಾಹಿತಿ ಪಡೆದು ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು. ಮುಂಬಡ್ತಿಯಿಂದ ಭರ್ತಿ ಮಾಡಬೇಕಾದ 54 ಭೂದಾಖಲೆಗಳ ಸಹಾಯಕ ನಿರ್ದೇಶಕರ ಹುದ್ದೆಗಳನ್ನು ಸರ್ಕಾರದ ಆದೇಶದಂತೆ ಜೇಷ್ಠತಾ ಪಟ್ಟಿಯನ್ನು ಪುನರಾವಲೋಕಿಸಿ ತಾತ್ಕಾಲಿಕ ಪಟ್ಟಿಯನ್ನು ಪ್ರಕಟಿಸಲಾಗಿದೆ. ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಪರಿಶೀಲಿಸಿ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿದ ನಂತರ ಮುಂಬಡ್ತಿ ಪ್ರಕ್ರಿಯೆ ಪ್ರಾರಂಭಿಸಲಾಗುವುದು.

ಸಂಖ್ಯೆ: ಆರ್‌ಡಿ 14 ಎಲ್‌ಜಿಕ್ಯೂ 2019

(ಆರ್.ವಿ.ದೇಶಪಾಂಡೆ)
ಕಂದಾಯ ಸಚಿವರು